ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕದ ವಿಧಾನಸಭೆಯ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 24/3/20

ಇಂದು ಅಧಿವೇಶನ ಅಂತ್ಯ

24-3-2020

ಬಜೆಟ್‌ಗೆ ಅನುಮೋದನೆ ಬಳಿಕ ಮುಂದೂಡಲು ನಿರ್ಧಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೊರೋನಾ ವೈರಸ್ ಹಬ್ಬುವ ಹಿನ್ನೆಲೆಯಲ್ಲಿ ಮಂಗಳವಾರ ಬಜೆಟ್‌ಗೆ ಅನುಮೋದನೆ ಪಡೆದು ವಿಧಾನಮಂಡಲದ ಉಭಯ ಸದನಗಳ ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲು ನಿರ್ಧರಿಸಲಾಗಿದೆ.

ವಾಸ್ತವವಾಗಿ ಈ ತಿಂಗಳ ಅಂತ್ಯದವರೆಗೆ ಅಧಿವೇಶನ ನಿಗದಿಯಾಗಿತ್ತು. ಆದರೆ, ಕೊರೋನಾ ವೈರಸ್ ಸೋಂಕು ತೀವ್ರವಾಗುವ ಆಪಾಯ ಇರುವುದರಿಂದ ಇನ್ನಷ್ಟು ಕಾಲ ಮುಂದುವರೆಸುವುದು ಬೇಡ ಎಂಬ ವಿವಿಧ ವೈದ್ಯಕೀಯ ತಜ್ಞರ ಸಲಹೆಯನ್ನು ಪರಿಗಣಿಸಿರುವ ರಾಜ್ಯ ಸರ್ಕಾರ ಪ್ರತಿಪಕ್ಷಗಳ ಮುಖಂಡರೊಂದಿಗೆ ಚರ್ಚೆ ನಡೆಸಿದ ಅಂತಿಮ ನಿರ್ಧಾರ ಕೈಗೊಂಡಿತು.

ಸೋಮವಾರ ಮಧ್ಯಾಹ್ನ ವಿಧಾನಸಭೆ ಯಸ್ಪೀಕರ್ ವಿಶ್ವೇಶ್ವರಹೆಗಡೆಕಾಗೇರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸದನ ಕಲಾಪ ವ್ಯವಹಾರಗಳ ಸಮಿತಿ ಸಭೆ ನಡೆಸಿದ ನಂತರ ಈ ತೀರ್ಮಾನ ಕೈಗೊಳ್ಳಲಾಯಿತು. ಪ್ರತಿಪಕ್ಷಗಳ ಮುಖಂಡರೂ ಸರ್ಕಾರದ ನಿಲುವಿಗೆ ಸಹಮತ ವ್ಯಕ್ತಪಡಿಸಿದರು. ನಂತರ ಕಾಗೇರಿ ಅವರು ಸದನದಲ್ಲಿ ಈ ನಿರ್ಧಾರವನ್ನು ಪ್ರಕಟಿಸಿದರು. ಹೀಗಾಗಿ, ಮಂಗಳವಾರ ವಿಧಾನಸಭೆ ಮತ್ತು ವಿಧಾನ ಪರಿಷತ್ತಿನಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಬಜೆಟ್ ಮೇಲೆ ಇದುವರೆಗೆ ನಡೆದ ಚರ್ಚೆಗೆ ಉತ್ತರ ನೀಡಲಿದ್ದಾರೆ.